ಇ) ಈ ಯೋಜನೆಯಡಿಯಲ್ಲಿ ಎಷ್ಟು ಜನರು ವಿಮೆ ಮಾಡಿರುವರು? (ಜಿಲ್ಲಾವಾರು ಮಾಹಿತಿ ನೀಡುವುದು)

ಈ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಈ ಯೋಜನೆಯಡಿಯಲ್ಲಿ ಎಷ್ಟು ಜನರು ವಿಮೆ ಮಾಡಿರುವರು?ರವರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ.

ಶ್ರೀ ಹೆಚ್. ವಿಶ್ವನಾಥ್ (ಸಹಕಾರ ಸಚಿವರು)

ಅ) ಹೌದು.

ಆ) ಈ ಯೋಜನೆಯಲ್ಲಿ ರೂ. 16.01 ಲಕ್ಷ ರೈತ ಸದಸ್ಯರು ನೋಂದಾಯಿಸಿ ಇವರಿಂದ ರೂ. 9.60 ಕೋಟಿಗಳನ್ನು ಸಂಗ್ರಹಿಸಲಾಗಿದೆ. ದಿನಾಂಕ: 1.6.2003 ರಿಂದ ದಿನಾಂಕ: 26.7.2003ರ ವರೆಗೆ 6249 ರೈತ ಸದಸ್ಯರು ಈ ಯೋಜನೆಯ ಲಾಭ ಪಡೆದಿರುತ್ತಾರೆ.

ಇ) ಈ ಯೋಜನೆಯಡಿಯಲ್ಲಿ ರಾಜ್ಯಾದ್ಯಂತ 16.01 ಲಕ್ಷ ರೈತ ಸದಸ್ಯರನ್ನು ನೊಂದಾಯಿಸಿದ್ದು ಜಿಲ್ಲಾವಾರು ಮಾಹಿತಿ ನೀಡಲಾಗಿದೆ.

ಈ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಕ್ರಮವಾಗಿ 8503 ಹಾಗೂ 5423 ರೈತರು ಈ ಯೋಜನೆಯಡಿ ನೋಂದಾಯಿಸಿದ್ದು ಬೈಲಹೊಂಗಲ ತಾಲ್ಲೂಕಿನಲ್ಲಿ 5 ಜನ ರೈತ ಸದಸ್ಯರು ಶಸ್ತ್ರ ಚಿಕಿತ್ಸೆಯನ್ನು ಹಾಗೂ 23 ರೈತ ಸದಸ್ಯರು ಹೊರ ರೋಗಿಗಳಾಗಿ ಚಿಕಿತ್ಸಾ ಸೌಲಭ್ಯವನ್ನು ಪಡೆದಿರುತ್ತಾರೆ. ಸವದತ್ತಿ ತಾಲ್ಲೂಕಿನಲ್ಲಿ 2423 ರೈತ ಸದಸ್ಯರು ನೋಂದಾಯಿಸಿದ್ದು 3 ಜನ ರೈತ ಸದಸ್ಯರು ಶಸ್ತ್ರ ಚಿಕಿತ್ಸಾ ಸೌಲಭ್ಯವನ್ನು 160 ಜನ ರೈತ ಸದಸ್ಯರು ಹೊರ ರೋಗಿಗಳಾಗಿ ಚಿಕಿತ್ಸೆಯನ್ನು ಪಡೆದಿರುತ್ತಾರೆ.

ರಾಜ್ಯದಲ್ಲಿ ಗ್ಯಾಸ್ ಸಿಲಿಂಡರ್ ಹೊಂದಿದವರಿಗೂ ಸೀಮೆ ಎಣ್ಣೆ ವಿತರಣೆ

4672 (5196) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ, (ಬೈಲಹೊಂಗಲ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಈಗ ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆಯಿಂದ ಗ್ಯಾಸ್ ಸಿಲಿಂಡರ್ ಇದ್ದವರಿಗೆ 2 ಲೀ. ಸೀಮೆಎಣ್ಣೆಯನ್ನು ವಿತರಿಸುವುದನ್ನು ನಿಲ್ಲಿಸಿರುವ ಸಂಗತಿ ನಿಜವೇ;

ಆ) ರಾಜ್ಯದಲ್ಲಿ ಈಗ ವಿದ್ಯುತ್ ಪೂರೈಕೆ ಸರಿಯಿಲ್ಲವಾದ್ದರಿಂದ ಸಾರ್ವಜನಿಕರಿಗೆ ಸೀಮೆಎಣ್ಣೆ ಅತೀ ಅವಶ್ಯಕವಾಗಿದ್ದು ಅದನ್ನು ನಿಲ್ಲಿಸಿರುವುದರಿಂದ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಗ್ಯಾಸ್ ಸಿಲಿಂಡರ್ ಹೊಂದಿದ ಪಡಿತರದಾರರಿಗೂ ಕೂಡ ಸೀಮೆಎಣ್ಣೆಯನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಹೌದು.

ಆ) ಬಂದಿದೆ.

ಇ) ಕೇಂದ್ರ ಸರ್ಕಾರದಿಂದ ಪ್ರತಿ ವರ್ಷ ರಾಜ್ಯಕ್ಕೆ ನೀಡುತ್ತಿರುವ ಸೀಮೆಎಣ್ಣೆಯ ಪ್ರಮಾಣವು ಗಣನೀಯವಾಗಿ ಕಡಿಮೆಯಾಗುತ್ತಿರುವುದರಿಂದ ಗ್ಯಾಸ್ ಸಿಲಿಂಡರ್ ಹೊಂದಿದ ಪಡಿತರ ಚೀಟಿದಾರರಿಗೆ ಸೀಮೆಎಣ್ಣೆ ನೀಡಲು ಸಾಧ್ಯವಾಗುತ್ತಿಲ್ಲ.